# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **815 (978)** |
| **ಸದಸ್ಯರ ಹೆಸರು** | | **ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | | **28-09-2020** |
| **ಉತ್ತರಿಸಬೇಕಾದ ಸಚಿವರು** | | **ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)** |
| **ಪ್ರಶ್ನೆ** | | **ಉತ್ತರ** |
| ಅ) | ಸರ್ಕಾರಿ ಮತ್ತು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರೊಫೆಸರ್ ಹುದ್ದೆಗಳನ್ನು ಸೃಷ್ಟಿಸಲಾಗಿದೆಯೇ; | ಸರ್ಕಾರಿ ಹಾಗೂ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರೊಫೆಸರ್ ಹುದ್ದೆಗಳು ಮಂಜೂರಾದ ಹುದ್ದೆಗಳಾಗಿರುವುದಿಲ್ಲ. |
| ಆ) | ಸೃಷ್ಟಿಸಿದಲ್ಲಿ, ಆ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ದಿನಾಂಕ:18.07.2018 ರಂದು ಅಧಿಸೂಚಿಸಲಾಗಿರುವ ಯು.ಜಿ.ಸಿ. ಮಾರ್ಗಸೂಚಿಗಳನ್ವಯ ಸರ್ಕಾರಿ ಹಾಗೂ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹ ಪ್ರಾಧ್ಯಾಪಕರುಗಳಿಗೆ ಸಿ.ಎ.ಎಸ್. ಅಡಿಯಲ್ಲಿ ಪ್ರಾಧ್ಯಾಪಕರಾಗಿ ವೃತ್ತಿಪದೋನ್ನತಿ ನೀಡಲಾಗುತ್ತದೆ. ವೃತ್ತಿ ಪದೋನ್ನತಿ ಪಡೆದ ಸಹ ಪ್ರಾಧ್ಯಾಪಕರು ವಯೋನಿವೃತ್ತರಾದ ನಂತರ ಪ್ರೊಫೆಸರ್ ಹುದ್ದೆಯು ಮೂಲವೃಂದಕ್ಕೆ ಪರಿವರ್ತಿತವಾಗುತ್ತದೆ. |
| ಇ) | ಪ್ರೊಫೆಸರ್ ಹುದ್ದೆಗಳಿಗೆ ಪದೋನ್ನತಿ ನೀಡಲು ಸರ್ಕಾರಕ್ಕೆ ಇರುವ ಅಡಚಣೆಗಳೇನು? | 2018ರ ಯು.ಜಿ.ಸಿ ನಿಯಮಗಳನ್ವಯ, ಪ್ರಾಧ್ಯಾಪಕರ ಹುದ್ದೆಗೆ ಸಿಎಎಸ್ ಅಡಿಯಲ್ಲಿ ವೃತ್ತಿ ಪದೋನ್ನತಿ ನೀಡುವ ಬಗ್ಗೆ, ಮಾರ್ಗಸೂಚಿಗಳನ್ನು ಹಾಗೂ ಆಯ್ಕೆ ಸಮಿತಿಯನ್ನು ಅನುಮೋದಿಸುವ ಕುರಿತು ಪರಿಶೀಲಿಸಲಾಗುತ್ತಿದೆ. |

ಇಡಿ 133 ಯುಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)